ಬಿ.ಬಿ.ಎಂ.ಪಿ. ಮುಖ್ಯ ಆಯುಕ್ತರವರ ಆಪ್ತ ಕಾರ್ಯಾಲಯ

ಸಂಖ್ಯೆ ಪಿ. ಎಸ್.ಆರ್. (1) 6109

ದಿನಾಂಕ 11/10/22

CE (Dasarahalli)

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದ ಆದೇಶ ಸಂಖ್ಯೆ: ನಅಇ 307 ಸಿಎಸ್ಎಸ್ 2020, ದಿನಾಂಕ: 27-07-2021 ರ 15ನೇ ಹಣಕಾಸು ಆಯೋಗದ ಅನುದಾನದಡಿಯಲ್ಲಿ ಕೈಗೊಳ್ಳಲು ಉದ್ದೇಶಿಸಿರುವ "Augmentation of water supply through Borewells, Network of pipelines and Ground water Recharges facilities in areas layouts of Shettyhalli Village, Abbigere Village and Chikkasandra Village in Ward No.12" (ಅನುಬಂಧ-2ರ ಕ್ರಮ ಸಂಖ್ಯೆ: 01, 02 ಮತ್ತು 03) ಕಾಮಗಾರಿಯ ಅಂದಾಜು ಮೊತ್ತ ರೂ.2.10 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಟೆಂಡರ್‌ಗೆ ಅನುಮೋದನೆ ನೀಡುವ ಬಗ್ಗೆ.

ವಿ.ಇ (ಯೋಜನೆ)

ಮುಖ್ಯ ಆಯುಕ್ತರು ಬಿಬಿಎಂಪಿ 13/10/22 1561

ಸಿದ್ಧಪಡಿಸಿದವರು: (ಯೋಜನೆ) Special Commissioner (Project) Brihat Bangalore Mahanagara Palike

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ನಅಇ 307 ಸಿಎಸ್ಎಸ್ 2020, ದಿನಾಂಕ: 27-07-2021.

2. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಬಿಬಿಎಂಪಿ/ಮು.ಆ/(ಜಿ)/1244/2022-23, ದಿನಾಂಕ: 01-07-2022/02-07-2022.

3. ದಿನಾಂಕ: 11-08-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿ.

* * * * *

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 27-07-2021ರ ಆದೇಶದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 15ನೇ ಹಣಕಾಸು ಆಯೋಗದಡಿಯಲ್ಲಿ 2020-21ನೇ ಸಾಲಿಗೆ ನೀರು ಸರಬರಾಜು ಹಾಗೂ ಘನತ್ಯಾಜ್ಯ ನಿರ್ವಹಣೆ ಸುಧಾರಣೆಗಾಗಿ ನಿಗಧಿಯಾಗಿರುವ ಒಟ್ಟು ರೂ.27900-00 ಲಕ್ಷಗಳ ಪೈಕಿ ರೂ.18030-00 ಲಕ್ಷಗಳ ಅನುದಾನದ ಮೊತ್ತಕ್ಕೆ ಅನುಬಂಧ-1, 2 ಮತ್ತು 3 ರಲ್ಲಿ ಪಟ್ಟಿ ಮಾಡಿರುವ ಒಟ್ಟು 147 ಸಂಖ್ಯೆಯ ಕಾಮಗಾರಿಗಳನ್ನೊಳಗೊಂಡ ಸೂಕ್ಷ್ಮ ಮಟ್ಟದ ಕ್ರಿಯಾಯೋಜನೆಗೆ (Micro Plan) ಸರ್ಕಾರದ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ. ಸದರಿ ಆದೇಶದ ಅನುಬಂಧ-2ರ ದಾಸರಹಳ್ಳಿ ವಲಯದ ಕಾಮಗಾರಿಗಳ ಕ್ರಮ ಸಂಖ್ಯೆ: 1, 2 ಮತ್ತು 3ರ ಕಾಮಗಾರಿಗಳಿಗೆ ಒಟ್ಟು ರೂ.210.00 ಲಕ್ಷಗಳ ಅನುದಾನ ಮೀಸಲಿಡಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 01-07-2022/02-07-2022ರ ಪತ್ರದಲ್ಲಿ, ಮುಖ್ಯ ಆಯುಕ್ತರು, ಬಿಬಿಎಂಪಿ ರವರು "Augmentation of water supply through Borewells, Network of pipelines and Ground water Recharges facilities in areas layouts of Shettyhalli Village, Abbigere Village and Chikkasandra Village in Ward No.12" ಕಾಮಗಾರಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 307 ಸಿಎಸ್ಎಸ್ 2020, ದಿನಾಂಕ: 27-07-2021ರ ಅನುಬಂಧ-2ರ ಕ್ರಮ ಸಂಖ್ಯೆ: 01, 02 ಮತ್ತು 03 ರಲ್ಲಿ ರೂ.210.00 ಲಕ್ಷಗಳಿಗೆ ಅನುಮೋದನೆಯಾಗಿದ್ದು, ಲೆಕ್ಕಶೀರ್ಷಿಕೆ 15th Finance Commission Tied Grants pertaining to Water Supply and Maintenance works ಅಡಿಯಲ್ಲಿ ಅನುಮೋದನೆ ದೊರೆತಿದ್ದು, ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ) ರವರು ಆಡಳಿತಾತ್ಮಕ ಅನುಮೋದನೆ ನಿರೀಕ್ಷಿಸಿ, ತಾಂತ್ರಿಕ ಅನುಮೋದನೆ ಪಡೆದು ಇ-ಪ್ರೊಕ್ಯೂರ್‌ಮೆಂಟ್ ಮುಖಾಂತರ ದ್ವಿ-ಲಕೋಟೆ ಟೆಂಡರ್ ಅಪ್ಲಾಸಿದ್ದು, ಸದರಿ ಕಾರ್ಯಪಾಲಕ ಅಭಿಯಂತರರವರು ಈ ಕೆಳಕಂಡಂತಿರುತ್ತವೆ ಎಂದು ಮುಖ್ಯ ಆಯುಕ್ತರು, ಬಿಬಿಎಂಪಿ ರವರು ತಿಳಿಸಿರುತ್ತಾರೆ.

ಸಲ್ಲಿಕೆ ದಿನಾಂಕ: 19/10/2022 ಸಂಖ್ಯೆ: 1811

ಮುಖ್ಯ ಆಯುಕ್ತರ ಕಛೇರಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯಪಾಲಕ ಅಭಿಯಂತರರ ಕಛೇರಿ ಬಿ.ಬಿ.ಎಂ.ಪಿ. ಸುಬ್ಬಣ್ಣ ಬಡಾವಣೆ

ಕ್ರಮ ಸಂಖ್ಯೆ	ಗುತ್ತಿಗೆದಾರರ ಹೆಸರು	ಟೆಂಡರ್‌ಗಿಟ್ಟ ಮೊತ್ತ (ರೂ. ಗಳಲ್ಲಿ)	ತಾಂತ್ರಿಕ ಮೌಲ್ಯಮಾಪನ
1	ಶ್ರೀ ಆರ್. ಶಿವರಾಮ್	1,80,37,114.70	ತಾಂತ್ರಿಕ ತುಲನಾತ್ಮಕ ಪಟ್ಟಿಯಲ್ಲಿ ವಿವರಿಸಿರುವಂತೆ ಮೌಲ್ಯಮಾಪನದ ಎಲ್ಲಾ ಅಂಶಗಳಲ್ಲು ತಾಂತ್ರಿಕ ಅರ್ಹತೆ ಹೊಂದಿರುತ್ತಾರೆ.
2	ಶ್ರೀ ಪ್ರಕಾಶ್ ಎಸ್.		ತಾಂತ್ರಿಕ ತುಲನಾತ್ಮಕ ಪಟ್ಟಿಯಲ್ಲಿ ವಿವರಿಸಿರುವಂತೆ ಮೌಲ್ಯಮಾಪನದ ಎಲ್ಲಾ ಅಂಶಗಳಲ್ಲು ತಾಂತ್ರಿಕ ಅರ್ಹತೆ ಹೊಂದಿರುತ್ತಾರೆ.

ಮೇಲ್ಕಂಡಂತೆ ದಿನಾಂಕ: 06-04-2022 ರಂದು ಆಯುಕ್ತರ ಅಧ್ಯಕ್ಷತೆಯಲ್ಲಿ ರಚಿತವಾಗಿರುವ ಮೌಲ್ಯಮಾಪನ / ಆರ್ಥಿಕ ಮೌಲ್ಯಮಾಪನ ಮತ್ತು ದರ ಸಂಧಾನದ ಸಮಿತಿಯ ತೀರ್ಮಾನದಲ್ಲಿ ತಾಂತ್ರಿಕ ಬಿಡ್‌ನಲ್ಲಿ ಅರ್ಹರಾಗಿರುವ ಗುತ್ತಿಗೆದಾರರ ತಾಂತ್ರಿಕ ಬಿಡ್‌ಗಳನ್ನು ಅಂಗೀಕರಿಸಿ, ಆರ್ಥಿಕ ಬಿಡ್‌ನ್ನು ತೆರೆಯಲು ಅನುಮತಿ ನೀಡಲಾಗಿರುತ್ತದೆ. ಅದರಂತೆ ದಿನಾಂಕ: 09-06-2022 ರಂದು ಆರ್ಥಿಕ ಬಿಡ್‌ನ್ನು ತೆರೆದಿರುತ್ತಾರೆ. ವಿವರಗಳು ಈ ಕೆಳಕಂಡಂತಿರುತ್ತವೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತರು ತಿಳಿಸಿರುತ್ತಾರೆ.

ಕ್ರ. ಸಂ	ಗುತ್ತಿಗೆದಾರರ ಹೆಸರು	ಟೆಂಡರ್‌ಗಿಟ್ಟ ಮೊತ್ತ 2018-19ರ ಅನುಮೋದಿತ ದರಗಳಂತೆ	2021-22ನೇ ಸಾಲಿನ ದರಪಟ್ಟಿಯಂತೆ ಟೆಂಡರ್‌ಗಿಟ್ಟ ಮೊತ್ತ	ಗುತ್ತಿಗೆದಾರರು ನಮೂದಿಸಿರುವ ಮೊತ್ತ ರೂ. ಗಳಲ್ಲಿ	2018-19ನೇ ಸಾಲಿನ ಎಸ್.ಆರ್ ದರಗಳಿಗೆ ಹೋಲಿಸಿದಾಗ ಶೇಕಡವಾರು	2021-22ನೇ ಸಾಲಿನ ದರಪಟ್ಟಿಗೆ ಹೋಲಿಸಿದಾಗ ಶೇಕಡವಾರು
1	R. Shivaram	1,80,37,114.70	1,88,85,164.34	2,06,52,466.68	14.49% Above	9.36% Above
2	Prakash S.			2,12,83,794.87	18.00% Above	12.70% Above

ಗುತ್ತಿಗೆದಾರರೊಂದಿಗೆ ದರ ಸಂಧಾನ ನಡೆಸಲಾಗಿದ್ದು, ಸದರಿ ದರ ಸಂಧಾನದ ವಿವರಗಳು ಈ ಕೆಳಕಂಡಂತಿವೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತರು ತಿಳಿಸಿರುತ್ತಾರೆ.

ದರ ಸಂಧಾನದ ವಿವರಗಳು					
ಕ್ರ.ಸಂ.	ಬಿಡ್‌ದಾರರ ಹೆಸರು	ಬಿಡ್‌ದಾರರು ನಮೂದಿಸಿರುವ ದರಗಳು	ಬಿಡ್‌ದಾರರು ದರ ಸಂಧಾನದ ನಂತರ ನಮೂದಿಸಿದ ಮೊತ್ತ	2018-19ನೇ ಸಾಲಿನ ಎಸ್.ಆರ್ ದರಗಳಿಗೆ ಹೋಲಿಸಿದಾಗ ಶೇಕಡವಾರು	2021-22ನೇ ಸಾಲಿನ ದರಪಟ್ಟಿಗೆ ಹೋಲಿಸಿದಾಗ ಶೇಕಡವಾರು
1	R. Shivaram	2,06,52,466.68	1,98,24,592.77	9.91% Above	4.97% Above

. . .3/-

ಸಮಿತಿಯ ಅಧ್ಯಕ್ಷರು ಬಿಡ್‌ದಾರರು ದರ ಸಂಧಾನದ ನಂತರ ನಮೂದಿಸಿರುವ ಶೇ.9.91% ಹೆಚ್ಚುವರಿ ಹಾಗೂ ಲೋಕೋಪಯೋಗಿ ಇಲಾಖೆಯ 2021-22ನೇ ಸಾಲಿನ ದರಪಟ್ಟಿಗೆ ಹೋಲಿಸಿದಾಗ ಶೇ.4.97% ಹೆಚ್ಚುವರಿಯನ್ನು 2018-19ನೇ ಸಾಲಿನ ದರಪಟ್ಟಿಗೆ ಶೇ.3.00% ಹೆಚ್ಚುವರಿಗೆ ಮಿತಿಗೊಳಿಸಿ ಅಂದರೆ ರೂ.1,85,78,228.14 ಗಳಿಗೆ 2018-19ನೇ ದರಪಟ್ಟಿ ದರಗಳಿಗೆ ಹೋಲಿಸಿದಾಗ ಶೇ.3.00% ಹೆಚ್ಚುವರಿ ಹಾಗೂ ಲೋಕೋಪಯೋಗಿ ಇಲಾಖೆಯ 2021-22ನೇ ಸಾಲಿನ ದರಪಟ್ಟಿಗೆ ಹೋಲಿಸಿದಾಗ ಶೇ.1.63% ಕಡಿಮೆ ದರಗಳಿಗೆ ಟೆಂಡರ್ ಅನುಮೋದನೆ ಹಾಗೂ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ ಸಮಿತಿಯು ನಿರ್ಣಯಿಸಿ, ಟೆಂಡರ್ ಅನುಮೋದಿಸುವ ಅಧಿಕಾರವು ಸರ್ಕಾರದ ವ್ಯಾಪ್ತಿಯಲ್ಲಿರುವುದರಿಂದ ಟೆಂಡರ್‌ನ ಎಲ್ಲಾ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಯನ್ನು ಪಡೆಯಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಸದರಿ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ಟೆಂಡರ್ ಅನುಮೋದನೆ ನೀಡುವಂತೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ: 11-08-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ಮುಂದೆ ಬಿ.ಬಿ.ಎಂ.ಪಿ. ಮುಖ್ಯ ಆಯುಕ್ತರ ದಿನಾಂಕ: 01-07-2022 / 02-07-2022 ರ ಪ್ರಸ್ತಾವನೆಯನ್ನು ಮಂಡಿಸಲಾಗಿದ್ದು, ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ, ವಿಷಯವನ್ನು ಚರ್ಚಿಸಿ ಈ ಕೆಳಕಂಡಂತೆ ನಿರ್ಣಯಿಸಲಾಗಿದೆ.

> "ವಿವರವಾದ ಚರ್ಚೆಯ ನಂತರ Augmentation of water supply through bore-wells, network of pipelines and ground water recharge facilities in areas layouts of Shettyhalli village, Abbigere Village and Chikkasandra Village ಯೋಜನೆಯ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, Sri.R.Shivaram. ರವರ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.1,80,37,114.70 ಗಳಿಗೆ ಹೋಲಿಸಿದಾಗ +3.00% ರಷ್ಟು ಹೆಚ್ಚು ಮತ್ತು ದಿನಾಂಕ:18.03.2022 ರಿಂದ ಜಾರಿಯಲ್ಲಿರುವ 2021-22 ನೇ ಸಾಲಿನ ದರಗಳಿಗೆ ಹೋಲಿಸಿದಾಗ ಶೇಕಡ -1.63% ರಷ್ಟು ಕಡಿಮೆ ಇರುವ ಅಂದರೆ, ರೂ.1,85,78,228.14 ಗಳ ಸಂಧಾನಿತ ಮೊತ್ತಕ್ಕೆ ಅನುಮೋದಿಸಲು ಮತ್ತು ರೂ.10 ಕೋಟಿಗಿಂತ ಕಡಿಮೆ ಇರುವ ಮೊತ್ತದ ಪ್ಯಾಕೇಜ್ ರೂಪಿಸಿ ಟೆಂಡರ್ ಕರೆದಿರುವ ಕ್ರಮವನ್ನು ಸಂಬಂಧಪಟ್ಟ ಮುಖ್ಯ ಅಭಿಯಂತರರು ನೀಡಿದ ವಿವರಣೆಯನ್ನು ಪರಿಗಣಿಸಿ ಸ್ಥಿರೀಕರಣಕ್ಕಾಗಿ, ಮಾನ್ಯ ಮುಖ್ಯಮಂತ್ರಿಗಳ ಅನುಮೋದನೆಗೆ ಸಲ್ಲಿಸಲು ಸರ್ವಾನುಮತದಿಂದ ತೀರ್ಮಾನಿಸಲಾಯಿತು."

ದಿನಾಂಕ: 11-08-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ನಅಇ 378 ಎಂಎನ್‌ವೈ 2022 (ಇ),
ಬೆಂಗಳೂರು, ದಿನಾಂಕ: 09-09-2022.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ: ನಅಇ 307 ಸಿಎಸ್‌ಎಸ್ 2020, ದಿನಾಂಕ: 27-07-2021 ರಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 15ನೇ ಹಣಕಾಸು ಆಯೋಗದಡಿಯಲ್ಲಿ 2020-21ನೇ ಸಾಲಿಗೆ ನೀರು ಸರಬರಾಜು ಹಾಗೂ ಘನತ್ಯಾಜ್ಯ ನಿರ್ವಹಣೆ ಸುಧಾರಣೆಗಾಗಿ

ನಿಗಧಿಯಾಗಿರುವ ಒಟ್ಟು ರೂ.27900-00 ಲಕ್ಷಗಳ ಪೈಕಿ, ರೂ.18030-00 ಲಕ್ಷಗಳ ಅನುದಾನದ ಮೊತ್ತ ಅನುಬಂಧ-1, 2 ಮತ್ತು 3 ರಲ್ಲಿ ಪಟ್ಟಿ ಮಾಡಿರುವ ಒಟ್ಟು 147 ಸಂಖ್ಯೆಯ ಕಾಮಗಾರಿಗಳನ್ನೊಳಗೊಂಡ ಸೂಕ್ಷ್ಮ ಮಟ್ಟದ ಕ್ರಿಯಾಯೋಜನೆಗೆ (Micro Plan) ಸರ್ಕಾರದ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ. ಸದರಿ ಆದೇಶದ ಅನುಬಂಧ-2ರ ದಾಸರಹಳ್ಳಿ ವಲಯದ ಕಾಮಗಾರಿಗಳ ಕ್ರಮ ಸಂಖ್ಯೆ: 1, 2 ಮತ್ತು 3ರ ಕಾಮಗಾರಿಗಳಿಗೆ ಒಟ್ಟು ರೂ.210.00 ಲಕ್ಷಗಳ ಅನುದಾನ ನಿಗಧಿಪಡಿಸಿದ್ದು, ಸದರಿ ಕಾಮಗಾರಿಗಳನ್ನು ಒಗ್ಗೂಡಿಸಿ ಮಾಡಲಾಗಿರುವ "Augmentation of water supply through bore-wells, network of pipelines and ground water recharge facilities in areas layouts of Shettyhalli village, Abbigere Village and Chikkasandra Village" ಪ್ಯಾಕೇಜಿನ ರೂ.2.10 ಕೋಟಿಗಳ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, ದಿನಾಂಕ: 11-08-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ, Sri.R.Shivaram. ರವರ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.1,80,37,114.70 ಗಳಿಗೆ ಹೋಲಿಸಿದಾಗ +3.00% ರಷ್ಟು ಹೆಚ್ಚು ಮತ್ತು ದಿನಾಂಕ:18.03.2022 ರಿಂದ ಜಾರಿಯಲ್ಲಿರುವ 2021-22 ನೇ ಸಾಲಿನ ದರಗಳಿಗೆ ಹೋಲಿಸಿದಾಗ ಶೇಕಡ -1.63% ರಷ್ಟು ಕಡಿಮೆ ಇರುವ ಅಂದರೆ, ರೂ.1,85,78,228.14 (ಒಂದು ಕೋಟಿ ಎಂಭತ್ತೈದು ಲಕ್ಷದ ಎಪ್ಪತ್ತೆಂಟು ಸಾವಿರದ ಎರಡು ನೂರ ಇಪ್ಪತ್ತೆಂಟು ರೂಪಾಯಿಗಳು ಹಾಗೂ ಹದಿನಾಲ್ಕು ಪೈಸೆಗಳು ಮಾತ್ರ) ಗಳ ಸಂಧಾನಿತ ಮೊತ್ತಕ್ಕೆ ಮಿತಿಗೊಳಿಸಿ ಟೆಂಡರ್‌ಗೆ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಅನುಮೋದನೆಯನ್ನು ನೀಡಿದೆ.

ಷರತ್ತುಗಳು:

1. ಕಾಮಗಾರಿಗಳಿಗೆ ಅನುಮೋದನೆ ನೀಡಿರುವ ಟೆಂಡರ್ ಮೊತ್ತಕ್ಕೆ ಬಿಡ್‌ದಾರರು ಒಪ್ಪದ ಪಕ್ಷದಲ್ಲಿ ಮರು ಟೆಂಡರ್ ಕರೆಯುವುದು.
2. ಮೇಲಿನ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ. ಕಾಯ್ದೆ / ನಿಯಮಗಳು ಹಾಗೂ ಎಲ್ಲಾ ಚಾಲ್ತಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಿರುವುದನ್ನು ಬಿಬಿಎಂಪಿ ಮುಖ್ಯ ಆಯುಕ್ತರು ವಿಚಿತಪಡಿಸಿಕೊಂಡು ಅನುಷ್ಠಾನಗೊಳಿಸುವುದು.
3. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 307 ಸಿಎಸ್‌ಎಸ್ 2020, ದಿನಾಂಕ: 27-07-2021ರಲ್ಲಿ ಮೀಸಲಿಟ್ಟಿರುವ ಅನುದಾನದಲ್ಲಿ ಭರಿಸುವುದು.
4. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು ಹಾಗೂ ಹೆಚ್ಚುವರಿ ಟೆಂಡರ್ ಪ್ರೀಮಿಯಂ ಅನ್ನು ಬಿಬಿಎಂಪಿಯ ಸ್ವಂತ ಸಂಪನ್ಮೂಲದಿಂದ ಭರಿಸತಕ್ಕದ್ದು.
5. ಕರ್ನಾಟಕ ಆರ್ಥಿಕ ಸಂಹಿತೆ 1958 ಸಾಧಿಲ್ವಾರು ವೆಚ್ಚ ಕೈಪಿಡಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳನುಸಾರ ಕ್ರಮವಹಿಸತಕ್ಕದ್ದು.
6. ಸರ್ಕಾರವು ಕಾಮಗಾರಿಗಳಿಗೆ ಆಡಳಿತಾತ್ಮಕ ಮತ್ತು ಟೆಂಡರ್‌ಗಳಿಗೆ ಅನುಮೋದನೆ ನೀಡಿದ್ದಾಗ್ಯೂ ಸಹ ಕಾಮಗಾರಿಯು ಪುನರಾವರ್ತನೆ ಆಗದಂತೆ ನೋಡಿಕೊಳ್ಳತಕ್ಕದ್ದು. ಅನುಮೋದನೆಗೊಂಡಿರುವ ಕಾಮಗಾರಿಯನ್ನಲ್ಲದೆ ಯಾವುದೇ ಕಾರಣಕ್ಕೆ ಬೇರೆ ಕಾಮಗಾರಿಗಳನ್ನು ಕೈಗೊಳ್ಳಬಾರದು.
7. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.

. . .5/-

8. ಸದರಿ ಬಿಡ್ಡುದಾರರು ಅಥವಾ ಇನ್ಯಾವುದೇ ಹಂತದಲ್ಲಿ ತಪ್ಪು ಮಾಹಿತಿ / ದಾಖಲೆ ನೀಡಿರುವುದು ಕಂಡುಬಂದಲ್ಲಿ ಟೆಂಡರ್‌ಅನ್ನು ರದ್ದುಪಡಿಸಲು ಬಿಬಿಎಂಪಿ ಮುಖ್ಯ ಆಯುಕ್ತರು ನಿಯಮಾನುಸಾರ ಕ್ರಮ ವಹಿಸುವುದು.
9. ದಿನಾಂಕ: 11-08-2022ರ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಯಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ತಪ್ಪದೆ ಪಾಲಿಸತಕ್ಕದ್ದು.
10. ರೂ.10.00 ಕೋಟಿಗಿಂತ ಕಡಿಮೆ ಪ್ಯಾಕೇಜ್‌ಗಳಲ್ಲಿನ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಸೂಕ್ತ ಸಮರ್ಥನೆ ಮತ್ತು ಸ್ಪಷ್ಟೀಕರಣಗಳನ್ನು ಪಡೆಯತಕ್ಕದ್ದು. ಇನ್ನು ಮುಂದೆ ಸೂಕ್ತ ಸಮರ್ಥನೆ ಇಲ್ಲದೆ ರೂ.10.00 ಕೋಟಿಗಿಂತ ಕಡಿಮೆ ಪ್ಯಾಕೇಜ್‌ಗಳಲ್ಲಿ ಕಾಮಗಾರಿಗಳನ್ನು ಪ್ರಸ್ತಾಪಿಸದಂತೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಕ್ಷ್ಮೀಸಾಗರ್ ಎನ್.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

09/09

ಇವರಿಗೆ:

1. ಮಹಾಲೇಖಪಾಲರು, ಲೆಕ್ಕ ತಪಾಸಣೆ / ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3 ಮತ್ತು 9), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿ-3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
11. ಕಾರ್ಯಪಾಲಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.